ವಸತಿ ಶಾಲೆಗಳಲ್ಲಿ ಸಾಮಗ್ರಿ ಪೂರೈಕೆ

498(1116); ಶ್ರೀ ಅರವಿಂದ ಲಿಂಬಾವಳಿ (ಮಹದೇವಪುರ)

ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಅಡಿಯಲ್ಲಿ ನಡೆಸಲಾಗುತ್ತಿರುವ ವಸತಿ ಶಾಲೆಗಳಿಗೆ ಸಾಮಗ್ರಿ ಪೂರೈಕೆಯಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದಲ್ಲಿ ಎಷ್ಟು ಮೊತ್ತದ ಅವ್ಯವಹಾರ ನಡೆದಿದೆ (ವಿವರಗಳನ್ನು ನೀಡುವುದು);

ಇ) ಈ ಅವ್ಯವಹಾರಗಳಿಗೆ ಕಾರಣಕರ್ತರು ಯಾರು; ಇವರ ಅವಧಿಯಲ್ಲಿ ನಡೆದಿರುವ ಖರೀದಿ ಪ್ರಕ್ರಿಯೆಗಳು ಯಾವುವು; ಅವುಗಳ ಪರಿಶೀಲನೆ ನಡೆಸಲಾಗಿದೆಯೇ;

ಈ) ಅವ್ಯವಹಾರಗಳಿಗೆ ಕಾರಣಕರ್ತರಾದವರ ವಿರುದ್ಧ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ), ಆ), ಇ) ಮತ್ತು ಈ) ಇಲ್ಲ. ಆದರೆ, ಸಮಾಜ ಕಲ್ಯಾಣ ಇಲಾಖೆಯಲ್ಲಿ ಹಾಸಿಗೆ ಮತ್ತು ದಿಂಬುಗಳ ಖರೀದಿಯಲ್ಲಿ ಅವ್ಯವಹಾರವಾಗಿರುತ್ತದೆ ಎಂಬ ಸುದ್ದಿ ದಿನಾಂಕ: 31/5/2015 ರ ಪ್ರಜಾವಾಣಿ ದಿನಪತ್ರಿಕೆಯಲ್ಲಿ ಪ್ರಕಟವಾಗಿರುತ್ತದೆ. ಈ ವಿಷಯವು ಸರ್ಕಾರದ ಗಮನಕ್ಕೆ ಬಂದ ಕೂಡಲೆ, ಕರ್ನಾಟಕ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ನೇತೃತ್ವದಲ್ಲಿ ವಿಚಾರಣೆಯನ್ನು ನಡೆಸಲು ಆದೇಶಿಸಲಾಗಿದೆ. ಅದರಂತೆ, ವಿಚಾರಣಾ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.